# ಬೆಂಗಳೂರು ವಿಶ್ವವಿದ್ಯಾಲಯ

ಜ್ಞಾನಭಾರತಿ, ಬೆಂಗಳೂರು-56.

ಸಂಖ್ಯೆ: ಎಸಿಎ-1/ಶೈಕ್ಷಣಿಕ/ಕೋವಿಡ್-19/2020-21

ದಿನಾಂಕ: 05.04.2021

**ಸುತ್ತೋಲೆ**

ಉಲ್ಲೇಖ: 1. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಅಕುಕ 90 ಎಸಿಎಸ್ 2021, ದಿನಾಂಕ: 02.04.2021
2. ಕುಲಪತಿಯವರ ಅನುಮೋದನೆ ದಿನಾಂಕ: 05.04.2021

** * **

ಕರ್ನಾಟಕ ಸರ್ಕಾರದ ಆದೇಶ (ಉಲ್ಲೇಖ-1)ದನುಸಾರ ವಿಶ್ವ ಆರೋಗ್ಯ ಸಂಸ್ಥೆಯು ಈಗಾಗಲೇ ಸಾಂಕ್ರಾಮಿಕ ರೋಗವೆಂದು ಘೋಷಿಸಿರುವ ಕೋವಿಡ್-19 ಸೋಂಕಿನ ಹರಡುವಿಕೆಯನ್ನು ತಡಗಟ್ಟುವ ನಿಟ್ಟಿನಲ್ಲಿ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (ಎಸ್‌ಡಿಎಂಎ)ದ ಅಡಿಯಲ್ಲಿ ಪರಿಣಾಮಕಾರಿಯಾಗಿ ಕ್ರಮಗಳನ್ನು ರಾಜ್ಯದಲ್ಲಿ ಕೈಗೊಂಡಿರುತ್ತದೆ.

ಸದರಿ ಆದೇಶದಲ್ಲಿನ ಸೂಚನೆಯ ಕ್ರಮಾಂಕ 3 ರಲ್ಲಿ **"ವಸತಿ ಶಾಲೆಗಳು ಮತ್ತು ಬೋರ್ಡಿಂಗ್ ಇರುವ ಶಾಲೆಗಳಲ್ಲಿ 10, 11 ಹಾಗೂ 12ನೇ ತರಗತಿಯ ಬೋರ್ಡ್ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು, ಉನ್ನತ ಶಿಕ್ಷಣ ಹಾಗೂ ವೃತ್ತಿಪರ ಕೋರ್ಸುಗಳ ವಿಶ್ವವಿದ್ಯಾಲಯಗಳ ಪರೀಕ್ಷೆ ಬರೆಯುವರು ಮತ್ತು ವೈದ್ಯಕೀಯ ಶಿಕ್ಷಣದ ತರಗತಿಗಳನ್ನು ಹೊರತುಪಡಿಸಿ, ಇತರೆ ಎಲ್ಲಾ ತರಗತಿಗಳನ್ನು ಸ್ಥಗಿತಗೊಳಿಸಲಾಗಿದೆ."**

ಉಲ್ಲೇಖಿತ ಆದೇಶದಲ್ಲಿ ತಿಳಿಸಿರುವ ನಿಯಮಗಳು ಮತ್ತು ನಿರ್ಭಂದಗಳು ದಿನಾಂಕ: 20.04.2021ರವರೆಗೆ ಚಾಲ್ತಿಯಲ್ಲಿದ್ದು ವಿಶ್ವವಿದ್ಯಾಲಯದ ಆಡಳಿತಕ್ಕೊಳಪಡುವ ಎಲ್ಲಾ ಸಂಯೋಜಿತ ಕಾಲೇಜು, ಘಟಕ ಕಾಲೇಜುಗಳಿಗೂ ಅನ್ವಯಿಸುವಂತೆ ಪರೀಕ್ಷೆ (Practical / Theory / Viva-Voce, etc.,) ಬರೆಯುವ ವಿದ್ಯಾರ್ಥಿಗಳನ್ನು ಹೊರತುಪಡಿಸಿ, ಎಲ್ಲಾ ಭೌತಿಕ ತರಗತಿಗಳನ್ನು ಹಾಗೂ ಎಲ್ಲಾ ಕಾಲೇಜು/ವಿಶ್ವವಿದ್ಯಾಲಯದ ವಸತಿ ನಿಲಯಗಳನ್ನು ಒಳಗೊಂಡಂತೆ ದಿನಾಂಕ: 20.04.2021ರವರೆಗೆ ಸ್ಥಗಿತಗೊಳಿಸಲಾಗಿರುತ್ತದೆ, ಬಾಕಿ ಉಳಿದಿರುವ ಪಠ್ಯಕ್ರಮಗಳನ್ನು ಆನ್-ಲೈನ್ ಮುಖಾಂತರ ಪಾಠ ಪ್ರವಚನ ನಡೆಸಲು ನಿರ್ದೇಶಿಸಲಾಗಿರುತ್ತದೆ.

ಆದೇಶಾನುಸಾರ

K. Jyothi 5/4/2021

ಕುಲಸಚಿವರು

ಗೆ,

ವಿಶ್ವವಿದ್ಯಾಲಯದ ಕಾಲೇಜುಗಳ ಪ್ರಾಂಶುಪಾಲರು, ಸಂಯೋಜಕರು, ವಿಭಾಗದ ಮುಖ್ಯಸ್ಥರು ಹಾಗೂ ವಿಶ್ವವಿದ್ಯಾಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು.

**ಪ್ರತಿಗಳು:**

1. ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560056.
2. ವಿದ್ಯಾರ್ಥಿ ನಿಲಯಗಳ ಕ್ಷೇಮಪಾಲಕರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
3. ನಿರ್ದೇಶಕರು, ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
4. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳು/ಕುಲಸಚಿವರು/ಕುಲಸಚಿವರು (ಮೌಲ್ಯಮಾಪನ), ಆಪ್ತ ಸಹಾಯಕರು, ವಿತ್ತಾಧಿಕಾರಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
5. ಕಛೇರಿ ಪ್ರತಿ.